# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ದಾವಣಗೆರೆ ಜಿಲ್ಲೆ ಜಗಳೂರು ತಾಲ್ಲೂಕು ದೋಣಿಹಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಕಾಮಗಾರಿಗಳ ಅನುಷ್ಠಾನದಲ್ಲಿ ನಡೆದಿರುವ ಅವ್ಯವಹಾರಗಳಲ್ಲಿ ಭಾಗಿಯಾಗಿರುವ ಅಧಿಕಾರಿ/ನೌಕರರುಗಳ ವಿರುದ್ಧ ಜಂಟಿ ಇಲಾಖಾ ವಿಚಾರಣೆ ಜರುಗಿಸಲು ವಿಚಾರಣಾಧಿಕಾರಿ ಮತ್ತು ಮಂಡನಾಧಿಕಾರಿಯನ್ನು ನೇಮಕಾತಿ ಮಾಡುವ ಬಗ್ಗೆ.

**ಓದಲಾಗಿದೆ:**
1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ದಾವಣಗೆರೆ ರವರ ಪತ್ರ ಸಂಖ್ಯೆ:ಜಿಪಂದಾ:(ಆ-2) :ಸಿಸಿಎ:ಸಿಆರ್:09: 2012-13 ದಿನಾಂಕ:14-03-2013
2. ಸರ್ಕಾರದ ಕಾರಣ ಕೇಳುವ ನೋಟೀಸು ದಿ:10-10-2013 ಮತ್ತು 03-01-2014.
3. ಆಪಾದಿತ ಅಧಿಕಾರಿ/ನೌಕರರು ಸಲ್ಲಿಸಿರುವ ಇವರ ಲಿಖಿತ ಹೇಳಿಕೆಗಳು. ದಿನಾಂಕ:18.11.2013, 8.11.2013,23.11.2013, 28.11.2013, 27.11.2013,

-----

**ಪ್ರಸ್ತಾವನೆ:**

ದಾವಣಗೆರೆ ಜಿಲ್ಲೆ ಜಗಳೂರು ತಾಲ್ಲೂಕು ದೋಣಿಹಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಕಾಮಗಾರಿಗಳ ಅನುಷ್ಠಾನದಲ್ಲಿ ನಡೆದಿರುವ ಅವ್ಯವಹಾರಗಳಲ್ಲಿ ಭಾಗಿಯಾಗಿರುವ ಈ ಕೆಳಕಂಡ ಅಧಿಕಾರಿ/ ನೌಕರರುಗಳಾದ:-

1) ಶ್ರೀ ಡಿ. ಎಂ. ಪ್ರಭುಸ್ವಾಮಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ ಜಗಳೂರು
2) ಶ್ರೀ ಎನ್. ಲಿಂಗರಾಜು, ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್,ಉಪ ವಿಭಾಗ, ಜಗಳೂರು.
3) ಶ್ರೀ ಹೆಚ್. ಹನುಮಂತಪ್ಪ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್,ಉಪ ವಿಭಾಗ, ಜಗಳೂರು.
4) ಶ್ರೀ ಎಸ್. ಬಿ. ರುದ್ರಪ್ಪ, ಪಂಚಾಯತಿ ಅಭಿವೃದ್ಧಿ ಅಧಿಕಾರಿ (ಪ್ರಭಾರ),
5) ಶ್ರೀ ರಾಜಣ್ಣ, ಹಿಂದಿನ ಕಾರ್ಯದರ್ಶಿ, ದೋಣಿಹಳ್ಳಿ, ಗ್ರಾಮ ಪಂಚಾಯತಿ ಜಗಳೂರು ತಾಲ್ಲೂಕು.
6) ಶ್ರೀ ಎಂ. ತಿಪ್ಪೇಸ್ವಾಮಿ, ಹಿಂದಿನ ವಲಯ ಅರಣ್ಯಾಧಿಕಾರಿ, ಸಾಮಾಜಿಕ ಅರಣ್ಯ ವಲಯ, ಜಗಳೂರು.
7) ಶ್ರೀ ಎಂ. ರುದ್ರಮುನಿ, (ನಿವೃತ್ತ) ವನ ಪಾಲಕ, ಸಾಮಾಜಿಕ ಅರಣ್ಯ ವಲಯ, ಜಗಳೂರು.
8) ಶ್ರೀ ಟಿ. ಆರ್. ಮಲ್ಲಿಕಾರ್ಜುನಪ್ಪ, ನಿವೃತ್ತ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ದೋಣಿಹಳ್ಳಿ, ಗ್ರಾಮ ಪಂಚಾಯತಿ, ಜಗಳೂರು ತಾಲ್ಲೂಕು

ಇವರುಗಳಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ). 1957ರ ನಿಯಮ 11ರಡಿ ಮತ್ತು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 214ರಡಿ ಶಿಸ್ತು ಕ್ರಮ ಜರುಗಿಸಲು ಮೇಲೆ ಓದಲಾದ ಕ್ರಮಸಂಖ್ಯೆ (2) ರಲ್ಲಿ ಸರ್ಕಾರದ ನೋಟೀಸ್‌ನಲ್ಲಿ ಅನುಬಂಧ-1 ರಿಂದ 4ನ್ನು ಒಳಗೊಂಡ ದೋಷಾರೋಪಣಾ ಪಟ್ಟಿಯೊಂದಿಗೆ ಕಾರಣ ಕೇಳುವ ನೋಟೀಸ್‌ನ್ನು ಜಾರಿಮಾಡಲಾಗಿತ್ತು. ಸದರಿ ನೋಟೀಸಿಗೆ ಅಪಾದಿತ ಅಧಿಕಾರಿ/ನೌಕರರುಗಳು ಮೇಲೆ ಓದಲಾದ ಕ್ರಮಸಂಖ್ಯೆ (3) ರಲ್ಲಿ ಲಿಖಿತ ಹೇಳಿಕೆಗಳನ್ನು ಸಲ್ಲಿಸಿ ಅವರ ವಿರುದ್ಧದ ಆರೋಪವನ್ನು ನಿರಾಕರಿಸಿ ಆರೋಪಗಳನ್ನು ಕೈಬಿಡಲು ಕೋರಿರುತ್ತಾರೆ. ಸದರಿ ಅಪಾದಿತ ಅಧಿಕಾರಿ/ನೌಕರರುಗಳು ಸಲ್ಲಿಸಿರುವ

ಲಿಖಿತ ಹೇಳಿಕೆಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿದ್ದು, ಅವರುಗಳು ಸಲ್ಲಿಸಿರುವ ವಿವರಣೆಗಳು ಸಮರ್ಥನೀಯವಾಗಿರುವುದಿಲ್ಲವಾದ್ದರಿಂದ ಸದರಿ ಅಧಿಕಾರಿ/ನೌಕರರುಗಳ ವಿರುದ್ಧದ ಆರೋಪಗಳ ಸತ್ಯಾಸತ್ಯತೆಯನ್ನು ತಿಳಿಯಲು ಜಂಟಿ ಇಲಾಖಾ ವಿಚಾರಣೆಯನ್ನು ನಡೆಸಲು ಸರ್ಕಾರವು ನಿರ್ಧರಿಸಿ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 173 ವಿಸೇಜಿ 2012 ಬೆಂಗಳೂರು, ದಿನಾಂಕ:21-03-2014.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ದಾವಣಗೆರೆ ಜಿಲ್ಲೆ ಜಗಳೂರು ತಾಲ್ಲೂಕು ದೋಣಿಹಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಕಾಮಗಾರಿಗಳ ಅನುಷ್ಠಾನದಲ್ಲಿ ನಡೆದಿರುವ ಅವ್ಯವಹಾರಗಳಲ್ಲಿ ಭಾಗಿಯಾಗಿರುವ ಈ ಕೆಳಕಂಡ ಅಧಿಕಾರಿ/ನೌಕಕರುಗಳಾದ:-

1) ಶ್ರೀ ಡಿ. ಎಂ. ಪ್ರಭುಸ್ವಾಮಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ ಜಗಳೂರು
2) ಶ್ರೀ ಎನ್. ಲಿಂಗರಾಜು, ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್,ಉಪ ವಿಭಾಗ, ಜಗಳೂರು.
3) ಶ್ರೀ ಹೆಚ್. ಹನುಮಂತಪ್ಪ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್,ಉಪ ವಿಭಾಗ, ಜಗಳೂರು.
4) ಶ್ರೀ ಎಸ್. ಬಿ. ರುದ್ರಪ್ಪ, ಪಂಚಾಯತಿ ಅಭಿವೃದ್ಧಿ ಅಧಿಕಾರಿ (ಪ್ರಭಾರ),
5) ಶ್ರೀ ರಾಜಣ್ಣ, ಹಿಂದಿನ ಕಾರ್ಯದರ್ಶಿ, ದೋಣಿಹಳ್ಳಿ, ಗ್ರಾಮ ಪಂಚಾಯತಿ ಜಗಳೂರು ತಾಲ್ಲೂಕು.
6) ಶ್ರೀ ಎಂ. ತಿಪ್ಪೇಸ್ವಾಮಿ, ಹಿಂದಿನ ವಲಯ ಅರಣ್ಯಾಧಿಕಾರಿ, ಸಾಮಾಜಿಕ ಅರಣ್ಯ ವಲಯ, ಜಗಳೂರು.
7) ಶ್ರೀ ಎಂ. ರುದ್ರಮುನಿ, (ನಿವೃತ್ತ) ವನ ಪಾಲಕ, ಸಾಮಾಜಿಕ ಅರಣ್ಯ ವಲಯ, ಜಗಳೂರು.
8) ಶ್ರೀ ಟಿ. ಆರ್. ಮಲ್ಲಿಕಾರ್ಜುನಪ್ಪ, ನಿವೃತ್ತ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ದೋಣಿಹಳ್ಳಿ, ಗ್ರಾಮ ಪಂಚಾಯತಿ, ಜಗಳೂರು ತಾಲ್ಲೂಕು

ಇವರುಗಳ ವಿರುದ್ಧ ಮಾಡಿರುವ ಆರೋಪಗಳ ಬಗ್ಗೆ ಇಲಾಖಾ ವಿಚಾರಣೆ ನಡೆಸಲು, ಕ್ರಮ ಸಂಖ್ಯೆ (1) ರಿಂದ (6) ರವರೆಗಿನ ಅಧಿಕಾರಿ/ನೌಕರರ ವಿರುದ್ಧ ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 11ರ ಅನುಸಾರ ಮತ್ತು ಕ್ರಮ ಸಂಖ್ಯೆ: (7) ಮತ್ತು (8) ರಲ್ಲಿನ ನೌಕರರ ವಿರುದ್ಧ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 214 ರಲ್ಲಿ ಪ್ರದತ್ತವಾದ ಅಧಿಕಾರದಂತೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ). ನಿಯಮ 11 ರ ಅನುಸಾರ ಇಲಾಖಾ ವಿಚಾರಣಾ ನಡೆಸಲು ಸದರಿ ನಿಯಮಾವಳಿಗಳ ನಿಯಮ 13ರ ಅಡಿಯಲ್ಲಿ ಜಂಟಿ ಇಲಾಖಾ ವಿಚಾರಣೆಗೆ ಆದೇಶಿಸಿದೆ.

ಈ ಇಲಾಖಾ ವಿಚಾರಣೆ ನಡೆಸಲು ಶ್ರೀ ಎನ್. ಸುಬ್ಬರಾವ್, ನಿವೃತ್ತ ನ್ಯಾಯಾಧೀಶರು, ಬೆಂಗಳೂರು, ಇವರನ್ನು ವಿಚಾರಣಾಧಿಕಾರಿಯಾಗಿ ಮತ್ತು ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತಿ, ದಾವಣಗೆರೆ ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿದೆ.

ವಿಚಾರಣಾಧಿಕಾರಿಯವರು ಈ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 11 ರಲ್ಲಿ ನಿಗದಿ ಪಡಿಸಿರುವ ಕಾರ್ಯವಿಧಾನದ ಪ್ರಕಾರ ವಿಚಾರಣೆ ಜರುಗಿಸಿ ವರದಿಯನ್ನು ಮೂರು ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ನಿಯಮಾನುಸಾರ ನಿಗದಿತ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಂಗಳೂರು ಗ್ರಾಮಾಂತರ ಇವರು ವಿಚಾರಣಾಧಿಕಾರಿಯವರಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಚಂದ್ರಶೇಖರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ದಾವಣಗೆರೆ/ ಬೆಂಗಳೂರು(ಗ್ರಾ)
3. ಶ್ರೀ ಎಸ್. ಸುಬ್ಬರಾವ್, ನಿವೃತ್ತ ನ್ಯಾಯಾಧೀಶರು, (ಚಾರಣಾಧಿಕಾರಿ), ಮನೆ ನಂ. 1033, 9ನೇ ಮೇನ್, 8ನೇ ಕ್ರಾಸ್, ನ್ಯಾಯಾಂಗ್ ಬಡಾವಣೆ, ಜಿಕೆವಿಕೆ ಅಂಚೆ, ಬೆಂಗಳೂರು-65 (ಮೊಬೈಲ್ ನಂ. 9845433376).
4. ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತಿ, ದಾವಣಗೆರೆ (ಮಂಡನಾಧಿಕಾರಿ).
5. ಸಂಬಂಧಿಸಿದ ಅಧಿಕಾರಿಗಳಿಗೆ.( ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ದಾವಣಗೆರೆ ಇವರ ಮುಖಾಂತರ)

**ಪ್ರತಿಯನ್ನು:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಸರ್ಕಾರದ ಕಾರ್ಯದರ್ಶಿ (ಪಂ.ರಾಜ್) /ಅಪರ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.
2. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
3. ಮಾಹಿತಿ ಕೇಂದ್ರ / ಶಾಖಾ ರಕ್ಷಕ ಕಡತ / ಹೆಚ್ಚುವರಿ ಪ್ರತಿ.